**OS-258/2022**
**PW-1**

**ಇಂದು ದಿಃ20-01-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ನಾನು, ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಬರೆಯಿಸಿದ ಎಲ್ಲಾ ವಿಷಯಗಳೆಲ್ಲವು ಸತ್ಯವಾಗಿರುತ್ತವೆ. ನಾನೇ ಹೇಳಿ ಬರೆಯಿಸಿ ಸಹಿ ಮಾಡಿರುತ್ತೇನೆ.**

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಕೆ.ಸಿ.ಕೆ. ವಕೀಲರಿಂದಃ

9 ಕ್ರಯ ಪತ್ರಗಳ ದೃ.ನಕಲುಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿ.ಪಿ-1 ರಿಂದ 9 ಎಂದು ಗುರುತಿಸಲಾಯಿತು. ಮುಟೇಷನ್ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-10 ಎಂದು ಗುರುತಿಸಲಾಯಿತು. ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-11 ಎಂದು ಗುರುತಿಸಲಾಯಿತು. ಹರಿಹರ ನಗರಸಭೆಗೆ ಮಾಹಿತಿ ಕಾಯಿದೆಯಡಿ ಸಲ್ಲಿಸಿದ ನಕಲು ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-12 ಎಂದು ಗುರುತಿಸಲಾಯಿತು. ನಗರ ಸಭೆಯವರು ಕೊಟ್ಟ ಹಿಂಬರಹವನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-13 ಎಂದು ಗುರುತಿಸಲಾಯಿತು. ನೋಟೀಸ್ ನ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-14 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಸಮಯಕೋರಿದ್ದಾರೆ.

(ತೆರೆದ ನ್ಯಾ. ದಲ್ಲಿ ಸಾಕ್ಷಿ ಹೇಳಿಕೆಯಂತೆ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪಡಿಸಿದೆ).

ಓ ಹೇ ಕೇ ಸರಿ ಇದೆ.

ಸಹಿ/-

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಹರಿಹರ.**